81 (17) ಶ್ರೀ ಕುಮಾರ್ ಬಂಗಾರಪ್ಪ (ಸೊರಬ) : ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಪಶುಸಂಗೋಪನಾ ಆಸ್ಪತ್ರೆಗಳ ಸಂಖ್ಯೆ ಎಷ್ಟು ಹಾಗೂ ಇದಕ್ಕೆ ಬೇಕಾಗಿರುವ ವೈದ್ಯರುಗಳು ಸಮರ್ಪಕವಾಗಿದ್ದಾರೆಯೇ:

ಆ) ಹಾಗಿಲ್ಲದಿದ್ದಲ್ಲಿ, ವೈದ್ಯರುಗಳನ್ನು ತುಂಬಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು:

ಇ) ವಿಳಂಬಕ್ಕೆ ಕಾರಣಗಳೇನು: ಯಾವಾಗ ನೇಮಕ ಮಾಡಲಾಗುವುದು?

ಡಾ: ವಿ.ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಮತ್ತು ಪಶುಸಂಗೋಪನೆ ಸಚಿವರು):

ಅ) ರಾಜ್ಯದಲ್ಲಿ 294 ಪಶು ಆಸ್ಪತ್ರೆಗಳು ಹಾಗೂ 1598 ಪಶು ಚಿಕಿತ್ಸಾಲಯಗಳು 173 ಸಂಚಾರಿ ಪಶುಚಿಕಿತ್ಸಾಲಯಗಳು ಕಾರ್ಯನಿರ್ವಹಿಸುತ್ತಿವೆ. ಪಶು ಆಸ್ಪತ್ರೆಗಳು ಹಾಗೂ ಪಶು ಚಿಕಿತ್ಸಾಲಯಗಳಿಗೆ ಮಂಜೂರಾದ 295 ಸಹಾಯಕ ನಿರ್ದೇಶಕರ ಹಾಗೂ 1653 ಪಶುವೈದ್ಯಾಧಿಕಾರಿಗಳ ಹುದ್ದೆಗಳಲ್ಲಿ ಕ್ರಮವಾಗಿ 37 ಹಾಗೂ 983 ಹುದ್ದೆಗಳು ಖಾಲಿ ಇದ್ದು, ಒಟ್ಟಾರೆ ವೈದ್ಯರ ಕೊರತೆ ಇದೆ.

ಆ) ಪಶು ಆಸ್ಪತ್ರೆಗಳಿಗೆ ಮಂಜೂರಾದ 295 ಸಹಾಯಕ ನಿರ್ದೇಶಕರ ಹುದ್ದೆಗಳ ಪೈಕಿ 37 ಹುದ್ದೆಗಳು ಖಾಲಿ ಇವೆ ಹಾಗೂ ಪಶು ಚಿಕಿತ್ಸಾಲಯಗಳು ಹಾಗೂ ಸಂಚಾರಿ ಪಶು ಚಿಕಿತ್ಸಾಲಯಗಳಿಗೆ ಮಂಜೂರಾದ 1653 ಪಶುವೈದ್ಯಾಧಿಕಾರಿಗಳ ಹುದ್ದೆಗಳ ಪೈಕಿ 983 ಹುದ್ದೆಗಳು ಖಾಲಿ ಇರುತ್ತವೆ.

ಏಳು ಸಹಾಯಕ ನಿರ್ದೇಶಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಪರಿಶೀಲನೆಯಲ್ಲಿದೆ.

577 ಪಶುವೈದ್ಯಾಧಿಕಾರಿಗಳ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಅನುಮೋದನೆ ನೀಡಿದೆ. ಆಯ್ಕೆ ಮಾಡಲಾದ 250 ಪಶುವೈದ್ಯಾಧಿಕಾರಿಗಳ ಅಂತಿಮ ಪಟ್ಟಿಯನ್ನು ದಿನಾಂಕ: 10-3-2006 ರಂದು ಪ್ರಕಟಿಸಿದೆ.

ಉಳಿದ 327 ಪಶುವೈದ್ಯಾಧಿಕಾರಿಗಳ ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಇ) ಸರ್ಕಾರದ ಮಿತವ್ಯಯ ಆದೇಶ ಜಾರಿಯಲ್ಲಿದ್ದು, ನೇಮಕ ಮಾಡಲಾಗುವ ವಿವರಗಳನ್ನು (ಆ) ನಲ್ಲಿ ನೀಡಲಾಗಿದೆ.

82 (18) ಶ್ರೀ ಕುಮಾರ್ ಬಂಗಾರಪ್ಪ (ಸೊರಬ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ತಾಲ್ಲೂಕು ಮಟ್ಟದಲ್ಲಿರುವ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಲು ಸರಕಾರ ಯೋಚಿಸಿದೆಯೇ:

ಆ) ಹಾಗಿಲ್ಲದಿದ್ದಲ್ಲಿ, ವಿಳಂಬವಾಗುತ್ತಿರಲು ಕಾರಣಗಳೇನು ಹಾಗೂ ಮೇಲ್ದರ್ಜೆಗೇರಿಸಲು ರೂಪುರೇಷೆಗಳೇನು?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಹೌದು.

ಆ) ಜನಸಂಖ್ಯೆ, ಹಾಸಿಗೆ ಸಾಮರ್ಥ್ಯ ಹಾಗೂ ಹೆಚ್ಚುವರಿ ಸೌಲಭ್ಯಗಳ ಅವಶ್ಯಕತೆಗಳ ಆಧಾರದ ಮೇಲೆ ಮೇಲ್ದರ್ಜೆಗೇರಿಸಲಾಗುವುದು.